**ಕರ್ನಾಟಕ ಸರ್ಕಾರ**

ಸಂಖ್ಯೆ-KPRC-ADM20 RBL/13/2020/DD2

ಕರ್ನಾಟಕ ಸರ್ಕಾರದ ಸಚಿವಾಲಯ,
3ನೇ ಹಂತ, 3ನೇ ಮಹಡಿ, ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ-06.03.2021

**ಅಧಿಸೂಚನೆ**

ವಿಷಯ : ಕರ್ನಾಟಕ ರಾಜ್ಯದಲ್ಲಿ ಪ್ರತಿ ವರ್ಷ ಫೆಬ್ರುವರಿ 9ನೇ ತಾರೀಖನ್ನು ಜೀತ ಪದ್ಧತಿ ರದ್ಧತಿ ದಿನಾಚರಣೆ ಎಂದು ಘೋಷಿಸಿರುವ ಬಗ್ಗೆ.

ಭಾರತೀಯ ಸಂವಿದಾನದಲ್ಲಿ ಶೋಷಣೆ ವಿರುದ್ಧ ಹಕ್ಕನ್ನು ಅನುಚ್ಛೇದ 23 ಮತ್ತು 24 ರಲ್ಲಿ ವಿವರಿಸಲಾಗಿದೆ. ಈ ಪ್ರಕಾರವಾಗಿ ಒತ್ತಾಯ ಪೂರ್ವಕ ಜೀತ ಹಾಗೂ ಮಾನವ ಕಳ್ಳ ಸಾಗಾಣಿಕೆ, ಮಕ್ಕಳನ್ನು ದುಡಿಸುವುದು, ಶೋಷಿಸುವುದು ಕಾನೂನಿನ್ವಯ ಶಿಕ್ಷಾರ್ಹ ಅಪರಾಧವಾಗಿದೆ. ಇದೇ ಬುನಾದಿಯ ಮೇಲೆ ಭಾರತದ ಸಂಸತ್ತು ಜೀತ ಪದ್ಧತಿ(ರದ್ಧತಿ) ಕಾಯ್ದೆಯನ್ನು 1976ರಲ್ಲಿ ದೇಶದಾದ್ಯಂತ ಜಾರಿ ಮಾಡಿ ಜೀತಕ್ಕಾಗಿ ವ್ಯಕ್ತಿಯನ್ನು ದುಡಿಸಿಕೊಳ್ಳುವುದು ಅಮಾನವೀಯ ಹಾಗೂ ಕ್ರಿಮಿನಲ್ ಅಪರಾಧವೆಂದು ಕಾಯ್ದೆಯಲ್ಲಿ ಉಲ್ಲೇಖಿಸಿದೆ. ದಿನಾಂಕ 9.2.1976ರಲ್ಲಿ ಜೀತ ಪದ್ಧತಿ ಕಾಯ್ದೆಗೆ ಘನವೆತ್ತ ಭಾರತದ ರಾಷ್ಟ್ರಪತಿಗಳು ಅಂಕಿತ ಹಾಕಿರುತ್ತಾರೆ. ಅಂದಿನಿಂದ , ಜೀತ ಪದ್ಧತಿ(ರದ್ಧತಿ) ಕಾಯ್ದೆ, 1976ರನ್ನು ದೇಶದ ಎಲ್ಲಾ ರಾಜ್ಯಗಳಲ್ಲು ಆಯಾಯ ಜಿಲ್ಲಾಧಿಕಾರಿಗಳು ಹಾಗೂ ಅವರಿಂದ ಪ್ರಾಧೀಕೃತವಾದ ಅಧಿಕಾರಿಗಳು ಜಾರಿ ಮಾಡುತ್ತಿರುವರು. ಈ ಪದ್ಧತಿಯಡಿ ದುಡಿಯುತ್ತಿರುವವರನ್ನು ಗುರುತಿಸಿ, ಬಿಡುಗಡೆಗೊಳಿಸಿ ಪುನರ್ವಸತಿ ಮಾಡುವ ಕುರಿತು ಕೇಂದ್ರ ಸರ್ಕಾರ ಕಾಲಕಾಲಕ್ಕೆ ಮಾರ್ಗಸೂಚಿಗಳನ್ನು, ಮಾದರಿ ಕಾರ್ಯವಿಧಾನಗಳನ್ನು ಎಲ್ಲಾ ರಾಜ್ಯ ಸರ್ಕಾರಗಳಿಗೆ ಕಳುಹಿಸುತ್ತಿದೆ.

ಕರ್ನಾಟಕ ರಾಜ್ಯ ಇಡೀ ದೇಶದಲ್ಲೇ ಅತೀ ಹೆಚ್ಚು ಜೀತದಾಳುಗಳನ್ನು ಗುರುತಿಸಿ ಬಿಡುಗಡೆ ಮಾಡಿದ್ದರೂ ಸಹ, ಸಾರ್ವಜನಿಕರಲ್ಲಿ, ಕಂಪನಿಗಳಲ್ಲಿ , ಅಧಿಕಾರಿ ಸಮುದಾಯದಲ್ಲಿ ಈ ಪದ್ಧತಿಯ ಕುರಿತು ಇನ್ನು ಹೆಚ್ಚು ಅರಿವು ಮೂಡಿಸಬೇಕಾಗಿದೆ. ಈ ಕಾರಣಕ್ಕಾಗಿಯೇ , ಜೀತದಾಳುಗಳ ಪುನರ್ವಸತಿ ಯೋಜನೆಯನ್ನು ಅನುಷ್ಠಾನ ಮಾಡುತ್ತಿರುವ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಪ್ರತೀ ವರ್ಷ ಫೆಬ್ರುವರಿ 9ನೇ ತಾರೀಖನ್ನು **ಜೀತ ಪದ್ಧತಿ ರದ್ಧತಿ ದಿನಾಚರಣೆ** ಎಂದು ಕರ್ನಾಟಕ ರಾಜ್ಯದಲ್ಲಿ ಘೋಷಿಸಿ ಎಲ್ಲಾ ಸರ್ಕಾರಿ ಕಛೇರಿಗಳಲ್ಲಿ, ಸಾರ್ವಜನಿಕ ಸ್ಥಳದಲ್ಲಿ ಕೆಲವು ಅರ್ಥಪೂರ್ಣ ಚಟುವಟಿಕೆಗಳನ್ನು ಜಿಲ್ಲಾ, ತಾಲ್ಲೂಕು ಹಾಗೂ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಆಯೋಜಿಸುವುದು ಸೂಕ್ತವೆಂದು ಭಾವಿಸಿದೆ:

1. ಎಲ್ಲಾ ಹಂತದ ಸರ್ಕಾರಿ ಕಛೇರಿಗಳಲ್ಲಿ ಜೀತ ಪದ್ಧತಿ ರದ್ಧತಿಗೊಳಿಸಲು ಪ್ರತಿಜ್ಞಾ ಕಾರ್ಯಕ್ರಮ ನಡೆಸುವುದು.

   **ಪ್ರತಿಜ್ಞೆ: "ಕರ್ನಾಟಕವನ್ನು ಜೀತ ವಿಮುಕ್ತಗೊಳಿಸಲು, ಸಂಕಷ್ಟದಲ್ಲಿರುವ ಸಮುದಾಯಗಳ ಜನರಿಗೆ ನ್ಯಾಯವನ್ನು ಒದಗಿಸಲು ನನ್ನ ಸೇವೆಯನ್ನು ಮುಡುಪಾಗಿಡುತ್ತೇನೆ, ಈ ಮೂಲಕ ಸಮಾನತೆಯನ್ನು ಸಾಧಿಸಲು ಪ್ರಾಮಾಣಿಕ ಪ್ರಯತ್ನವನ್ನು ಮಾಡುತ್ತೇನೆ ಎಂದು ಪ್ರತಿಜ್ಞೆ ಮಾಡುತ್ತೇನೆ"**

2. ಜೀತಮುಕ್ತರು, ಸಮುದಾಯಕಾರ್ಯಕರ್ತರು, ವಿದ್ಯಾರ್ಥಿಗಳು, ಸರ್ಕಾರೇತರ ಸಂಸ್ಥೆಗಳೊಂದಿಗೆ ಸೇರಿ ಸಾರ್ವಜನಿಕ ಸ್ಥಳಗಳಲ್ಲಿ ಜಾಥಾ ಹಾಗೂ ಮಾನವ ಸರಪಳಿ ನಿರ್ಮಿಸುವುದು, ಬಿತ್ತಿ ಪತ್ರ ಹಂಚಿಕೆ, ಬೀದಿ ನಾಟಕ , ಜೀತವಿಮುಕ್ತರ ಅನುಭವಗಳನ್ನು ಹಂಚಿಕೊಳ್ಳುವ ಕಾರ್ಯಕ್ರಮಗಳನ್ನು ಆಯೋಜಿಸಬೇಕು.

3. ಅಧಿಕಾರಿಗಳಿಗೆ ಜೀತ ಕಾಯ್ದೆ, ಮಾನವ ಹಕ್ಕುಗಳ ಉಲ್ಲಂಘನೆ ವಿಷಯಗಳ ಕುರಿತು ಕಾನೂನು ತಜ್ಞರಿಂದ, ನ್ಯಾಯಾಧೀಶರುಗಳಿಂದ ಅಧಿವೇಶನಗಳನ್ನು ಆಯೋಜಿಸುವುದು.

Scanned with CamScanner

4. ಗ್ರಾಮ ಪಂಚಾಯಿತಿಗಳ ಸಾರ್ವಜನಿಕ ಸ್ಥಳದಲ್ಲಿ ಜೀತ ಪದ್ಧತಿ ಕುರಿತಂತೆ ಚಿತ್ರಗಳಿಂದ ಕೂಡಿದ ಗೋಡೆ ಬರಹ ಬರೆಸುವುದು, ಜೀತಮುಕ್ತ ಗ್ರಾಮಗಳನ್ನು ಫಲಕ/ ಗೋಡೆ ಬರಹದ ಮೂಲಕ ಘೋಷಿಸುವುದನ್ನು ಮಾಡಬೇಕು.

5. ಜೀತದಾಳುಗಳ ಪುನರ್ವಸತಿಯನ್ನು ಸಮಗ್ರವಾಗಿ ನೆರವೇರಿಸಲು ಜಿಲ್ಲಾ ಮಟ್ಟದಲ್ಲಿ ಶಿಬಿರಗಳನ್ನು ಆಯೋಜಿಸುವುದು, ಜೀತವಿಮುಕ್ತರ ಮಕ್ಕಳಿಗೆ ಶಿಕ್ಷಣ ಸೌಲಭ್ಯ , ವಿದ್ಯಾರ್ಥಿ ವೇತನಗಳನ್ನು ನೀಡಬೇಕು.

ಈ ಎಲ್ಲಾ ವಾಸ್ತವಾಂಶಗಳ ಹಿನ್ನೆಲೆಯಲ್ಲಿ ಸರ್ಕಾರವು ಕರ್ನಾಟಕ ರಾಜ್ಯದಲ್ಲಿ ಪ್ರತಿ ವರ್ಷ ಫೆಬ್ರವರಿ 9ನೇ ತಾರೀಖನ್ನು **ಜೀತ ಪದ್ಧತಿ ರದ್ಧತಿ ದಿನಾಚರಣೆ** ಎಂದು ಘೋಷಿಸಿ ಅದನ್ನು ಅರ್ಥಪೂರ್ಣವಾಗಿ ಆಚರಿಸಬೇಕೆಂದು ಈ ಅಧಿಸೂಚನೆ ಮೂಲಕ ಆದೇಶ ಹೊರಡಿಸಿದೆ.

(ಉಮಾ ಮಹಾದೇವನ್)

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ. ರಾಜ್)

ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ

ಗೆ,

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, – ಈ ಅಧಿಸೂಚನೆಯನ್ನು ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಿ, 100 ಪ್ರತಿಗಳನ್ನು ಸರ್ಕಾರದ ಅಧೀನ ಕಾರ್ಯದರ್ಶಿ, (ಜಿ.ಪಂ.) (ಪ್ರ) ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಗೆ ಒದಗಿಸಲು ಕೋರಿದೆ.

ಪ್ರತಿಯನ್ನು

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು ರವರಿಗೆ ಕಳುಹಿಸುತ್ತಾ ಮಾನ್ಯ ಸಚಿವರ ಅವಗಾಹನೆಗೆ ತರಲು ಕೋರಿದೆ.
2. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು ರವರ ಮಾಹಿತಿಗಾಗಿ.
3. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳು ರವರ ಮಾಹಿತಿಗಾಗಿ.
4. ಆಯುಕ್ತರು, ಪಂಚಾಯತ್ ರಾಜ್ ಆಯುಕ್ತಾಲಯ, ಕೆ.ಜಿ ರಸ್ತೆ, ಬೆಂಗಳೂರು ರವರಿಗೆ ಅವಶ್ಯ ಕ್ರಮಕ್ಕಾಗಿ.
5. ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತ ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
6. ಆಯುಕ್ತರು, ಗ್ರಾಮೀಣ ನೀರು ಮತ್ತು ನೈರ್ಮಲ್ಯ ಇಲಾಖೆ, ಕಾವೇರಿ ಭವನ, ಬೆಂಗಳೂರು.
7. ಆಯುಕ್ತರು, ಕಾರ್ಮಿಕ ಇಲಾಖೆ, ಡೈರಿ ಸರ್ಕಲ್, ಬೆಂಗಳೂರು ರವರ ಮಾಹಿತಿಗಾಗಿ.
8. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಹೊಸ ಸಾರ್ವಜನಿಕ ಕಟ್ಟಡಗಳು, ನೃಪತುಂಗ ರಸ್ತೆ, ಬೆಂಗಳೂರು ರವರ ಮಾಹಿತಿಗಾಗಿ.
9. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಂಗಳೂರು ರವರ ಮಾಹಿತಿಗಾಗಿ.
10. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳಿಗೆ ಮುಂದಿನ ಅವಶ್ಯ ಕ್ರಮಕ್ಕಾಗಿ.
11. ಎಲ್ಲಾ ಜಿಲ್ಲೆಯ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಮುಂದಿನ ಅವಶ್ಯ ಕ್ರಮಕ್ಕಾಗಿ.
12. ಎಲ್ಲಾ ತಾಲ್ಲೂಕು ಪಂಚಾಯತ್, ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ.

Scanned with CamScanner